# ಕರ್ನಾಟಕ ಸರ್ಕಾರ

ಸಂಖ್ಯೆ: STI-TRNG0TRNG/3/2023

ಕರ್ನಾಟಕ ಸರ್ಕಾರ ಸಚಿವಾಲಯ ತರಬೇತಿ ಸಂಸ್ಥೆ,
8ನೇ ಮಹಡಿ, ವಿಶ್ವೇಶ್ವರಯ್ಯ ಚಿಕ್ಕಗೋಪುರ,
ಡಾ: ಬಿ.ಆರ್. ಅಂಬೇಡ್ಕರ್ ವೀದಿ,
ಬೆಂಗಳೂರು-560001, ದಿನಾಂಕ:18.01.2023

## ಅಧಿಕೃತಜ್ಞಾಪನ

**ವಿಷಯ**: ಕರ್ನಾಟಕ ಸರ್ಕಾರ ಸಚಿವಾಲಯ/ಕರ್ನಾಟಕ ವಿಧಾನಸಭೆ/ ಪರಿಷತ್ತು ಸಚಿವಾಲಯ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಅಧಿಕಾರಿ/ಸಿಬ್ಬಂದಿಗಳಿಗೆ **"ಕಂಪ್ಯೂಟರ್‌ನಲ್ಲಿ ಕನ್ನಡ ಕಲಿಕೆ"** ವಿಷಯದ ಕುರಿತು ಕಾರ್ಯಗಾರವನ್ನು ಹಮ್ಮಿಕೊಂಡಿರುವ ಬಗ್ಗೆ.

**ಉಲ್ಲೇಖ:**
1. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರ ಪತ್ರ ಸಂಖ್ಯೆ: ಕಅಪ್ರಾ/ಅ/204/2022-23, ದಿನಾಂಕ: 22.07.2022.
2. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಆಸು) ರವರ ಪತ್ರ ಸಂಖ್ಯೆ: ಸಿಆಸುಇ (ಆಸು) 40 ಇಆತ 2022, ದಿನಾಂಕ: 07.01.2023.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ-1 ಮತ್ತು 2ರ ಪತ್ರಗಳಲ್ಲಿ ಸಚಿವಾಲಯದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ **"ಕಂಪ್ಯೂಟರ್‌ನಲ್ಲಿ ಕನ್ನಡ ಕಲಿಕೆ"** ವಿಷಯದ ಕುರಿತು ತರಬೇತಿ ಕಾರ್ಯಗಾರವನ್ನು ಹಮ್ಮಿಕೊಳ್ಳುವಂತೆ ತಿಳಿಸಿರುತ್ತಾರೆ.

ಅದರಂತೆ, ಕರ್ನಾಟಕ ಸರ್ಕಾರ ಸಚಿವಾಲಯ/ಕರ್ನಾಟಕ ವಿಧಾನಸಭೆ/ಪರಿಷತ್ತು ಸಚಿವಾಲಯ ಹಾಗೂ ಕರ್ನಾಟಕ ಲೋಕಸೇವಾ ಆಯೋಗದ ಅಧಿಕಾರಿ/ಸಿಬ್ಬಂದಿಗಳಿಗೆ **"ಕಂಪ್ಯೂಟರ್‌ನಲ್ಲಿ ಕನ್ನಡ ಕಲಿಕೆ"** ವಿಷಯದ ಕುರಿತು **ದಿನಾಂಕ:01.02.2023(ಬುಧವಾರ) ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ (ಅರ್ಧ ದಿನ)** ತರಬೇತಿ ಕಾರ್ಯಗಾರವನ್ನು **ವಿಕಾಸಸೌಧದಲ್ಲಿನ 4ನೇ ಮಹಡಿಯಲ್ಲಿರುವ ಕೊಠಡಿ ಸಂಖ್ಯೆ:419ರಲ್ಲಿ** ಆಯೋಜಿಸಲಾಗಿದೆ.

ಸದರಿ ಕಾರ್ಯಾಗಾರಕ್ಕೆ ಕರ್ನಾಟಕ ಸರ್ಕಾರ ಸಚಿವಾಲಯ/ಕರ್ನಾಟಕ ವಿಧಾನಸಭೆ/ಪರಿಷತ್ತು ಸಚಿವಾಲಯ ಹಾಗೂ ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ಹಾಗೂ ಈ ಕಾರ್ಯಾಗಾರಕ್ಕೆ ಹಾಜರಾಗುವ ಎಲ್ಲಾ ಅಧಿಕಾರಿ/ಸಿಬ್ಬಂದಿಗಳಿಗೆ ಸಂಬಂಧಪಟ್ಟ ಮೇಲಾಧಿಕಾರಿಗಳು ಕಾರ್ಯಗಾರಕ್ಕೆ ಹಾಜರಾಗಲು ಅನುವು ಮಾಡಿಕೊಟ್ಟು ಕಾರ್ಯಾಗಾರವನ್ನು ಯಶಸ್ವಿ ಮಾಡಿಕೊಡುವಂತೆ ಕೋರಲಾಗಿದೆ.

ಮಧ್ಯಾಹ್ನ ಲಘು ಉಪಹಾರದ ವ್ಯವಸ್ಥೆ ಇರುತ್ತದೆ.

P. Vasavamba 18/01/23

**(ಪಿ.ವಾಸವಾಂಬ)**
ಉಪ ನಿರ್ದೇಶಕರು(ತರಬೇತಿ)
ಸಚಿವಾಲಯ ತರಬೇತಿ ಸಂಸ್ಥೆ

18/01

**ಇವರಿಗೆ:**
1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು ರವರ ಆಪ್ತಶಾಖೆ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಆಸು ಇಲಾಖೆ(ಆಸು), ಬಹುಮಹಡಿಗಳ ಕಟ್ಟಡ, ಬೆಂಗಳೂರು.

3. ಮುಖ್ಯ ಚುನಾವಣಾಧಿಕಾರಿ, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು.
4. ಕಾರ್ಯದರ್ಶಿಯವರು, ಕರ್ನಾಟಕ ವಿಧಾನಸಭೆ / ವಿಧಾನಪರಿಷತ್ತು / ಕರ್ನಾಟಕ ಲೋಕಸೇವಾ ಆಯೋಗ.
5. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸು ಇಲಾಖೆ(ಲೆಕ್ಕಪತ್ರ) / ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸು ಇಲಾಖೆ (ಲೆಕ್ಕಪತ್ರ-1)/(ಲೆಕ್ಕಪತ್ರ-3)/(ಐ.ಆರ್.ಎಲ್.ಎ)., ಬೆಂಗಳೂರು.
6. ರಾಜಭವನ, ಬೆಂಗಳೂರು.
7. ವಿಧಾನಸೌಧ, ವಿಕಾಸಸೌಧ ಮತ್ತು ಬಹುಮಹಡಿಗಳ ಕಟ್ಟಡಗಳ ಸೂಚನಾ ಫಲಕಗಳು.
8. ಸಚಿವಾಲಯ ತರಬೇತಿ ಸಂಸ್ಥೆಯ ಸೂಚನಾ ಫಲಕ / ಅಂತರ್ಜಾಲ ತಾಣ (ಇ-ಆಫೀಸ್ ತಂತ್ರಾಂಶ), (kgsti.karnataka.gov.in).